ಪ್ರಿನ್ಸಿಪಾಲ್

# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಎಚ್.ರಸ್ತೆ, ತುಮಕೂರು-572 103, ☎ : 0816-2255650, 2273511 ಫ್ಯಾಕ್ಸ್ : 0816- 2270719

ಸಂಖ್ಯೆ:ತುವಿ: ಪ.ವಿ: 2017-18 : 564 ದಿನಾಂಕ: 26.07.2017

## ಅಧಿಸೂಚನೆ

**ವಿಷಯ:** 2017 ರ ಆಗಸ್ಟ್/ಸೆಪ್ಟಂಬರ್ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕ ಶಿಕ್ಷಣ (B.Ed.) ಪದವಿಯ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನ (CBCS) ಹಾಗೂ ಪ್ರಥಮ ಮತ್ತು ದ್ವಿತೀಯ ಸೆಮಿಸ್ಟರ್ (NON-CBCS ಪೂರಕ) ಪರೀಕ್ಷೆಗಳ ವೇಳಾಪಟ್ಟಿ, ಪರೀಕ್ಷಾ ಕೇಂದ್ರ ಘೋಷಣೆ ಮತ್ತು ಪರೀಕ್ಷಾ ಮುಖ್ಯ ಅಧೀಕ್ಷಕರು ಹಾಗೂ ಉಪಅಧೀಕ್ಷಕರುಗಳ ನೇಮಕಾತಿ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 22.07.2017

* * * * *

2017 ರ ಆಗಸ್ಟ್/ಸೆಪ್ಟಂಬರ್ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕ ಶಿಕ್ಷಣ (B.Ed.) ಪದವಿಯ ಪ್ರಥಮ ಮತ್ತು ತೃತೀಯ ಸೆಮಿಸ್ಟರ್‌ನ (CBCS) ಹಾಗೂ ಪ್ರಥಮ ಮತ್ತು ದ್ವಿತೀಯ ಸೆಮಿಸ್ಟರ್ (2014-15 ನೇ ಸಾಲಿನ NON-CBCS ಪೂರಕ) ಪರೀಕ್ಷೆಗಳ ಅಂತಿಮ ಪರೀಕ್ಷಾ ವೇಳಾಪಟ್ಟಿಯನ್ನು ಇದರೊಂದಿಗೆ ಕಳುಹಿಸಲಾಗಿದ್ದು, ಈ ವೇಳಾಪಟ್ಟಿಯಂತೆ ಪರೀಕ್ಷೆಗಳನ್ನು ನಡೆಸಲಾಗುವುದು.

**ಈ ಕೆಳಕಂಡಂತೆ ಪರೀಕ್ಷಾ ಕೇಂದ್ರಗಳನ್ನು ಘೋಷಣೆ ಮಾಡಲಾಗಿರುತ್ತದೆ.**

| ಕ್ರ.ಸಂ. | ಪರೀಕ್ಷಾ ಕೇಂದ್ರ | ಜೋಡಣೆ ಮಾಡಲಾದ ಕಾಲೇಜುಗಳು |
|---|---|---|
| 1. | ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯ, ತುಮಕೂರು | 1A) ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯ, ತುಮಕೂರು<br>1B) ಭಾರತಿ ಶಿಕ್ಷಣ ಮಹಾವಿದ್ಯಾಲಯ, ತುಮಕೂರು<br>1C) ದಿಗ್ವಿಜಯ ಶಿಕ್ಷಣ ಮಹಾವಿದ್ಯಾಲಯ, ಹಡವನಹಳ್ಳಿ ಗೇಟ್. |
| 2. | ಕೆ.ಎಸ್.ಇ.ಎಫ್. ಶಿಕ್ಷಣ ಮಹಾವಿದ್ಯಾಲಯ, ತುಮಕೂರು. | 2A) ಕೆ.ಎಸ್.ಇ.ಎಫ್. ಶಿಕ್ಷಣ ಮಹಾವಿದ್ಯಾಲಯ, ತುಮಕೂರು<br>2B) ನಯಾಲ ಶಿಕ್ಷಣ ಮಹಾವಿದ್ಯಾಲಯ, ತುಮಕೂರು |
| 3. | ಶ್ರೀ ಸಿದ್ಧಗಂಗಾ ಶಿಕ್ಷಣ ಮಹಾವಿದ್ಯಾಲಯ, ತುಮಕೂರು. | 3A) ಶ್ರೀ ಸಿದ್ಧಗಂಗಾ ಶಿಕ್ಷಣ ಮಹಾವಿದ್ಯಾಲಯ, ತುಮಕೂರು<br>3B) ಎಸ್.ವಿ.ಎಸ್. ಶಿಕ್ಷಣ ಮಹಾವಿದ್ಯಾಲಯ, ತುಮಕೂರು |
| 4. | ಶ್ರೀ ಕೃಷ್ಣ ಶಿಕ್ಷಣ ಮಹಾವಿದ್ಯಾಲಯ, ತುಮಕೂರು | 4A) ಶ್ರೀ ಕೃಷ್ಣ ಶಿಕ್ಷಣ ಮಹಾವಿದ್ಯಾಲಯ, ತುಮಕೂರು<br>4B) ) ರಾಜೀವ್ ಗಾಂಧಿ ಶಿಕ್ಷಣ ಮಹಾವಿದ್ಯಾಲಯ, ತುಮಕೂರು<br>4C) ಅಕ್ಷಯ ಶಿಕ್ಷಣ ಮಹಾವಿದ್ಯಾಲಯ, ತುಮಕೂರು |
| 5. | ಇಂದಿರಾ ಶಿಕ್ಷಣ ಮಹಾವಿದ್ಯಾಲಯ, ತುಮಕೂರು | 5A) ಇಂದಿರಾ ಶಿಕ್ಷಣ ಮಹಾವಿದ್ಯಾಲಯ, ತುಮಕೂರು<br>5B) ದಿವ್ಯ ಶಿಕ್ಷಣ ಮಹಾವಿದ್ಯಾಲಯ, ತುಮಕೂರು |
| 6. | ಕಲ್ಪತರು ಶಿಕ್ಷಣ ಮಹಾವಿದ್ಯಾಲಯ, ತಿಪಟೂರು | 6A) ಕಲ್ಪತರು ಶಿಕ್ಷಣ ಮಹಾವಿದ್ಯಾಲಯ, ತಿಪಟೂರು<br>6B) ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯ, ತಿಪಟೂರು. |
| 7. | ಶ್ರೀ ಟಿ.ವಿ.ವಿ. ಶಿಕ್ಷಣ ಮಹಾವಿದ್ಯಾಲಯ, ಮಧುಗಿರಿ | – |
| 8. | ಆರ್. ಮುದ್ದುರಂಗೇಗೌಡ ಶಿಕ್ಷಣ ಮಹಾವಿದ್ಯಾಲಯ, ಶಿರಾ. | – |

ಪರೀಕ್ಷಾ ಕೇಂದ್ರಗಳನ್ನಾಗಿ ಘೋಷಿಸಲಾಗಿರುವ ಕಾಲೇಜುಗಳ **ಪ್ರಾಂಶುಪಾಲರುಗಳನ್ನು ಆಯಾ ಪರೀಕ್ಷಾ ಕೇಂದ್ರಗಳ ಪರೀಕ್ಷಾ ಮುಖ್ಯ ಅಧೀಕ್ಷಕರು**(Examination Chief Superintendent)ಗಳೆಂದು ನೇಮಕಾತಿ ಮಾಡಲಾಗಿದೆ ಹಾಗೂ **ಹೆಚ್ಚುವರಿ ಮುಖ್ಯ ಅಧೀಕ್ಷಕರು**(Additional Chief Superintendents)ಗಳನ್ನು ಮಾನ್ಯ ಕುಲಪತಿಯವರ ಆದೇಶದಂತೆ ಈ ಕೆಳಗಿನಂತೆ ನೇಮಕಾತಿ ಮಾಡಲಾಗಿದೆ.

| ಕ್ರ.ಸಂ | ಪರೀಕ್ಷಾ ಕೇಂದ್ರ | ಹೆಚ್ಚುವರಿ ಪರೀಕ್ಷಾ ಅಧೀಕ್ಷಕರುಗಳ ಹೆಸರು |
|---|---|---|
| 1. | ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯ, ತುಮಕೂರು | ಪ್ರಾಂಶುಪಾಲರು, ಭಾರತಿ ಶಿಕ್ಷಣ ಮಹಾವಿದ್ಯಾಲಯ, ತುಮಕೂರು. |
| 2. | ಕೆ.ಎಸ್.ಇ.ಎಫ್. ಶಿಕ್ಷಣ ಮಹಾವಿದ್ಯಾಲಯ, ತುಮಕೂರು | ಪ್ರಾಂಶುಪಾಲರು, ನಯಾಲ್ ಶಿಕ್ಷಣ ಮಹಾವಿದ್ಯಾಲಯ, ತುಮಕೂರು. |
| 3. | ಶ್ರೀ ಸಿದ್ಧಗಂಗಾ ಶಿಕ್ಷಣ ಮಹಾವಿದ್ಯಾಲಯ, ತುಮಕೂರು. | ಪ್ರಾಂಶುಪಾಲರು, ಎಸ್.ವಿ.ಎಸ್. ಶಿಕ್ಷಣ ಮಹಾವಿದ್ಯಾಲಯ, ತುಮಕೂರು. |
| 4. | ಶ್ರೀ ಕೃಷ್ಣ ಶಿಕ್ಷಣ ಮಹಾವಿದ್ಯಾಲಯ, ತುಮಕೂರು | ಪ್ರಾಂಶುಪಾಲರು, ಅಕ್ಷಯ ಶಿಕ್ಷಣ ಮಹಾವಿದ್ಯಾಲಯ, ತುಮಕೂರು. |
| 5. | ಇಂದಿರಾ ಶಿಕ್ಷಣ ಮಹಾವಿದ್ಯಾಲಯ, ತುಮಕೂರು | ಪ್ರಾಂಶುಪಾಲರು, ದಿವ್ಯ ಶಿಕ್ಷಣ ಮಹಾವಿದ್ಯಾಲಯ, ತುಮಕೂರು. |
| 6. | ಕಲ್ಪತರು ಶಿಕ್ಷಣ ಮಹಾವಿದ್ಯಾಲಯ, ತಿಪಟೂರು | ಪ್ರಾಂಶುಪಾಲರು, ಬಸವೇಶ್ವರ ಶಿಕ್ಷಣ ಮಹಾವಿದ್ಯಾಲಯ, ತಿಪಟೂರು. |
| 7. | ಶ್ರೀ ಟಿ.ವಿ.ವಿ. ಶಿಕ್ಷಣ ಮಹಾವಿದ್ಯಾಲಯ, ಮಧುಗಿರಿ | – |
| 8. | ಆರ್. ಮುದ್ದುರಂಗೇಗೌಡ ಶಿಕ್ಷಣ ಮಹಾವಿದ್ಯಾಲಯ, ಶಿರಾ. | – |

ಎಲ್ಲಾ ಪರೀಕ್ಷಾ ಕೇಂದ್ರಗಳ ಪರೀಕ್ಷಾ ಮುಖ್ಯ ಅಧೀಕ್ಷಕರುಗಳು/ಹೆಚ್ಚುವರಿ ಮುಖ್ಯ ಅಧೀಕ್ಷಕರುಗಳು ಪರೀಕ್ಷಾ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವುದು.

ಪರೀಕ್ಷಾ ಕೇಂದ್ರದ ಕಾಲೇಜುಗಳಿಗೆ ಜೋಡಣೆ ಮಾಡಲಾದ ಕಾಲೇಜುಗಳ ಪ್ರಾಂಶುಪಾಲರುಗಳು ತಮ್ಮ ಕಾಲೇಜಿನ ವಿದ್ಯಾರ್ಥಿಗಳ ಹಾಗೂ ಇನ್ನಿತರ ಮಾಹಿತಿಗಳನ್ನು ಪರೀಕ್ಷಾ ಮುಖ್ಯ ಅಧೀಕ್ಷಕರುಗಳಿಗೆ ಒದಗಿಸಬೇಕು ಮತ್ತು **ತಮ್ಮ ಕಾಲೇಜಿನ ಎಲ್ಲಾ ಅಧ್ಯಾಪಕರುಗಳನ್ನು ಪರೀಕ್ಷಾ ಕಾರ್ಯಗಳಿಗೆ ಕಡ್ಡಾಯವಾಗಿ ನಿಯೋಜಿಸಬೇಕು** ಹಾಗೂ ಪರೀಕ್ಷೆಗಳು ಸುಗಮವಾಗಿ ನಡೆಯಲು ಎಲ್ಲಾ ಸಹಕಾರಗಳನ್ನು ನೀಡತಕ್ಕದ್ದು.

ಪರೀಕ್ಷಾ ಮುದ್ರಣ ಸಾಮಾಗ್ರಿಗಳನ್ನು ಹೊರತು ಪಡಿಸಿ ಉಳಿದ ಪರೀಕ್ಷಾ ಲೇಖನ ಸಾಮಾಗ್ರಿಗಳನ್ನು ವಿದ್ಯಾರ್ಥಿಗಳಿಂದ ಪಡೆಯುವ ಅರ್ಜಿ ಪರಿಶೀಲನಾ ಶುಲ್ಕ (Scrutiny Fees) ರೂ. 10/- ರ ಶುಲ್ಕದಲ್ಲಿ ರೂ. 6.00 ನ್ನು ಉಪಯೋಗಿಸಿಕೊಂಡು ಉಳಿದ ರೂ 4.00 ನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ ಪಾವತಿಸುವುದು. ಪರೀಕ್ಷಾ ಕೇಂದ್ರಕ್ಕೆ ಜೋಡಣೆ ಮಾಡಲಾದ ಕಾಲೇಜಿನವರು ಸಂಬಂಧಿಸಿದ ಪರೀಕ್ಷಾ ಕೇಂದ್ರಕ್ಕೆ ಅರ್ಜಿ ಪರಿಶೀಲನಾ ಶುಲ್ಕವನ್ನು ಪಾವತಿಸುವುದು.

ಪರೀಕ್ಷಾ ಕಾರ್ಯಗಳಲ್ಲಿ ಏನಾದರೂ ಸಮಸ್ಯೆಗಳು ಉಂಟಾದಲ್ಲಿ ಕೂಡಲೇ **ಕುಲಸಚಿವರು(ಮೌಲ್ಯಮಾಪನ)**-Mobile No.:9448261860, **ಉಪಕುಲಸಚಿವರು(ಮೌಲ್ಯಮಾಪನ)**- 9481266917, ಇವರುಗಳನ್ನು ಸಂಪರ್ಕಿಸಿ ಮುಂದಿನ ಕ್ರಮ ಕೈಗೊಳ್ಳುವುದು.

**ಪರೀಕ್ಷಾ ಮುಖ್ಯ ಅಧೀಕ್ಷಕರುಗಳಿಗೆ (Examination Chief Superintendent) ಸೂಚನೆಗಳು:**

1. ಪರೀಕ್ಷಾ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸುವವರು ಪರೀಕ್ಷಾ ದಿನದಂದು ಪರೀಕ್ಷಾ ಸಮಯಕ್ಕಿಂತ **ಒಂದು ಗಂಟೆ ಮುಂಚಿತವಾಗಿ** ಕಾಲೇಜಿಗೆ ಬಂದು ಮೊಹರು ಮಾಡಿದ ಪ್ರಶ್ನೆ ಪತ್ರಿಕೆ ಲಕೋಟೆಯನ್ನು ತಮ್ಮ ಸಮ್ಮುಖದಲ್ಲೇ ತೆರೆದು ಪರೀಕ್ಷಾ ಕೊಠಡಿಗೆ ವಿತರಿಸುವ ವ್ಯವಸ್ಥೆ ಮಾಡಬೇಕು. **ಮುಖ್ಯ ಅಧೀಕ್ಷಕರು ಇಲ್ಲದೆ ಇದ್ದಾಗ ಅನಧಿಕೃತವಾಗಿ ಬೇರೆ ಯಾರೂ ಕೂಡ ಪ್ರಶ್ನೆ ಪತ್ರಿಕೆಗಳ ಲಕೋಟೆಯನ್ನು ತೆರೆಯಬಾರದು.**

2. ಪರೀಕ್ಷಾ ಕಾರ್ಯಗಳಿಗೆ ಸಂಬಂಧಿಸಿದಂತೆ ಪರೀಕ್ಷಾ ಕೇಂದ್ರಕ್ಕೆ ಜೋಡಣೆ ಮಾಡಲಾದ ಕಾಲೇಜುಗಳ ಹಾಗೂ ಪರೀಕ್ಷಾ ಕೇಂದ್ರದಲ್ಲಿರುವ ಖಾಯಂ ಅಧ್ಯಾಪಕರುಗಳನ್ನೇ ಕಡ್ಡಾಯವಾಗಿ ಬಳಸಿಕೊಳ್ಳುವುದು ಮತ್ತು ಪರೀಕ್ಷಾ ಕಾರ್ಯಗಳಿಗೆ ಬಳಸಿಕೊಳ್ಳಲಾದ ಅಧ್ಯಾಪಕರ ಪಟ್ಟಿಯನ್ನು ಕಡ್ಡಾಯವಾಗಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು.
3. ಜಾಗೃತದಳದವರು ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದಾಗ ಕುಲಸಚಿವರು(ಮೌಲ್ಯಮಾಪನ) ಇವರ ಆದೇಶದಂತೆ ಕಾರ್ಯ ನಿರ್ವಹಿಸುತ್ತಾರೆ, ಅವರಿಗೆ ಸಂಪೂರ್ಣ ಸಹಕಾರ ನೀಡುವುದು ಮುಖ್ಯ ಅಧೀಕ್ಷಕರು ಹಾಗೂ ಕಾಲೇಜಿನ ಅಧ್ಯಾಪಕರ ಜವಾಬ್ದಾರಿಯಾಗಿರುತ್ತದೆ.
4. ತಮ್ಮ ಕಾಲೇಜಿನ ಅಧ್ಯಾಪಕರನ್ನು ಮೌಲ್ಯಮಾಪನ ಅಥವಾ ಇತರೆ ಪರೀಕ್ಷಾ ಕಾರ್ಯಗಳಿಗೆ ನೇಮಿಸಿ ಕುಲಸಚಿವರು(ಮೌಲ್ಯಮಾಪನ) ಇವರಿಂದ ಆದೇಶ ಬಂದ ಕೂಡಲೇ ಅಂತಹ ಅಧ್ಯಾಪಕರುಗಳನ್ನು ತಕ್ಷಣದಿಂದಲೇ ಕರ್ತವ್ಯಕ್ಕೆ ನಿಯೋಜಿಸುವುದು. ಅವರ ಬದಲಿಗೆ ಅತಿಥಿ ಉಪನ್ಯಾಸಕರಿಂದ ಕೊಠಡಿ ಮೇಲ್ವಿಚಾರಕರ ಕಾರ್ಯ ನಿರ್ವಹಿಸಿಕೊಳ್ಳುವುದು.
5. ಯಾವುದೇ ಕಾರಣಕ್ಕೂ ಪರೀಕ್ಷಾ ಅಕ್ರಮಗಳು ನಡೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ಮತ್ತು ಪರೀಕ್ಷಾ ಪಾವಿತ್ರತೆಯನ್ನು ಕಾಪಾಡುವುದು ತಮ್ಮ ಹೊಣೆಗಾರಿಕೆಯಾಗಿರುತ್ತದೆ.
6. Question Paper Code ಗೆ ಅನುಸಾರವಾಗಿ ಉತ್ತರ ಪತ್ರಿಕೆ ಪುಸ್ತಕಗಳನ್ನು Room Superintendents Invigilation Dairy ಯೊಂದಿಗೆ ಪ್ಯಾಕ್ ಮಾಡುವುದು ಹಾಗೂ ಆ ಪ್ಯಾಕ್‌ನ ಮೇಲೆ ದಿನಾಂಕ, ವಿಷಯ, ಕಾಲೇಜಿನ ಕೋಡ್, ಕಾಲೇಜಿನ ಹೆಸರು ಮತ್ತು ವಿಳಾಸ, Question Paper Code ನ್ನು ಹಾಗೂ ಬಂಡಲ್‌ನಲ್ಲಿರುವ ಒಟ್ಟು ಉತ್ತರ ಪತ್ರಿಕೆಗಳ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು.
7. ಪ್ರಶ್ನೆ ಪತ್ರಿಕೆಗಳು ಯಾವ ಕಾರಣಕ್ಕೂ ಪರೀಕ್ಷೆಯ ಸಮಯಕ್ಕಿಂತ ಮುಂಚೆ ಬಹಿರಂಗಗೊಳ್ಳದಂತೆ ಪ್ರಾಂಶುಪಾಲರು/ಮುಖ್ಯ ಅಧೀಕ್ಷಕರು ಸುರಕ್ಷಿತವಾಗಿ ಸಂರಕ್ಷಿಸುವುದು, ಗೌಪ್ಯತೆ ಕಾಪಾಡುವುದಕ್ಕೆ ಮೊದಲ ಆದ್ಯತೆ ನೀಡಲು ತಿಳಿಸಿದೆ.
8. ಪ್ರಾಂಶುಪಾಲರುಗಳು ಪರೀಕ್ಷಾ ದಿನಗಳಲ್ಲಿ ಸಾಂಧರ್ಬಿಕ ರಜೆ/ ಇತರೆ ರಜೆ ಮೇಲೆ ತೆರಳುವ ಸಂದರ್ಭದಲ್ಲಿ ಕುಲಸಚಿವರು(ಮೌಲ್ಯಮಾಪನ) ಇವರಿಗೆ ಮಾಹಿತಿ ನೀಡುವುದು.

<u>ಹೆಚ್ಚುವರಿ ಮುಖ್ಯ ಅಧೀಕ್ಷಕರು (Additional Chief Superintendent) ಗಳ ಕರ್ತವ್ಯಗಳು:-</u>

1. ಪರೀಕ್ಷಾ ದಿನದಲ್ಲಿ ಪರೀಕ್ಷಾ ಮುಖ್ಯ ಅಧೀಕ್ಷಕರಿಗೆ, ಪರೀಕ್ಷೆಗಳನ್ನು ಪಾರದರ್ಶಕತೆಯಿಂದ ನಿಯಮಾನುಸಾರ, ಕ್ರಮಬದ್ಧವಾಗಿ ನಡೆಯಲು ಸಂಪೂರ್ಣ ಸಹಕಾರ ನೀಡುವುದು.
2. ಪ್ರಶ್ನೆ ಪತ್ರಿಕೆಗಳ ಪ್ಯಾಕೆಟ್‌ಗಳನ್ನು ಮುಖ್ಯ ಅಧೀಕ್ಷಕರು Open ಮಾಡುವ ಸಂದರ್ಭದಲ್ಲಿ ಹಾಜರಿದ್ದು, ಪ್ರಶ್ನೆ ಪತ್ರಿಕೆಗಳ ಪ್ಯಾಕೆಟ್‌ಗಳು ಸುರಕ್ಷಿತವಾಗಿ ಸಂರಕ್ಷಿಸಲ್ಪಟ್ಟಿವೆಯೇ ಎಂಬುದನ್ನು ದೃಢೀಕರಿಸಿಕೊಂಡು Question Paper Packet Opening Certificate ನಮೂನೆಯಲ್ಲಿ ಕಡ್ಡಾಯವಾಗಿ ಸಹಿ ಮಾಡಲೇಬೇಕು.
3. ಮುಖ್ಯ ಅಧೀಕ್ಷಕರು/ ಪ್ರಾಂಶುಪಾಲರು ಅನಿವಾರ್ಯ ಕಾರಣಗಳಿಂದ ರಜೆ ಮೇಲೆ ತೆರಳಿದ್ದರೆ ಮಾತ್ರ, ಕುಲಸಚಿವರು(ಮೌಲ್ಯಮಾಪನ) ಇವರಿಗೆ ಮಾಹಿತಿ ನೀಡಿ, ಪರೀಕ್ಷಾ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸುವುದು.
4. ಪರೀಕ್ಷಾ ಅಕ್ರಮಗಳು ನಡೆಯದಂತೆ ನೋಡಿಕೊಳ್ಳುವಲ್ಲಿ ಹೆಚ್ಚುವರಿ ಮುಖ್ಯ ಅಧೀಕ್ಷಕರು ದಕ್ಷತೆಯಿಂದ ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸಬೇಕು.

<u>ಪ್ರಶ್ನೆ ಪತ್ರಿಕೆಗಳನ್ನು ಸ್ವೀಕರಿಸುವ ಬಗ್ಗೆ ಸೂಚನೆಗಳು:</u>

1. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಸಂಬಂಧಿಸಿದ ಪ್ರಶ್ನೆ ಪತ್ರಿಕೆಗಳನ್ನು ಪರೀಕ್ಷೆ ನಡೆಯುವ ದಿನದಂದೇ ಆಯಾ ಪರೀಕ್ಷಾ ಕೇಂದ್ರಗಳಿಗೆ ಕಳುಹಿಸಲಾಗುವುದು. ಆ ಪ್ರಶ್ನೆ ಪತ್ರಿಕೆಗಳ ಪ್ಯಾಕೆಟ್‌ಗಳನ್ನು ಪ್ರಾಂಶುಪಾಲರು/ಪರೀಕ್ಷಾ ಮುಖ್ಯ ಅಧೀಕ್ಷಕರು ಖುದ್ದಾಗಿ ಪಡೆದು ಕೊಳ್ಳುವುದು.
2. ಪ್ರಾಂಶುಪಾಲರು ತಮ್ಮ ಹಂತದಲ್ಲಿಯೇ ಉಪಅಧೀಕ್ಷಕರನ್ನು ನೇಮಿಸಿಕೊಂಡು ಅವರಿಗೆ ಪರೀಕ್ಷೆ ನಡೆಸುವಂತೆ ಸೂಚಿಸಬಾರದು. ವಿಶ್ವವಿದ್ಯಾನಿಲಯದ ವತಿಯಿಂದಲೇ Additional Chief Superintendent

ನೇಮಿಸಿದ್ದು, ಪರೀಕ್ಷಾ ದಿನಗಳಲ್ಲಿ ಅವರ ಸಹಕಾರದೊಂದಿಗೆ ಪರೀಕ್ಷೆ ನಡೆಸುವುದು ಪ್ರಾಂಶುಪಾಲರ/ಪರೀಕ್ಷಾ ಮುಖ್ಯ ಅಧೀಕ್ಷಕರ ಮುಖ್ಯ ಕರ್ತವ್ಯವಾಗಿರುತ್ತದೆ.

**ಉತ್ತರ ಪತ್ರಿಕೆಗಳನ್ನು ರವಾನಿಸುವ ಬಗ್ಗೆ ಸೂಚನೆಗಳು:**

ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ನಡೆದ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ವಿಶ್ವವಿದ್ಯಾನಿಲಯದಿಂದ ಅಧಿಕೃತವಾಗಿ ನಿಯೋಜಿಸಲ್ಪಟ್ಟವರಿಗೆ ಪರೀಕ್ಷೆ ಮುಗಿದ ತಕ್ಷಣ ಪ್ರಾಂಶುಪಾಲರು/ಪರೀಕ್ಷಾ ಮುಖ್ಯ ಅಧೀಕ್ಷಕರು ಸೂಕ್ತ ವಿವರಗಳೊಂದಿಗೆ ನೀಡುವುದು.

**ವಿಶೇಷ ಸೂಚನೆ: ಈ ಅಧಿಸೂಚನೆಯೊಂದಿಗೆ ಲಗತ್ತಿಸಲಾಗಿರುವ ಸೂಚನಾ ಪತ್ರವನ್ನು ಕಡ್ಡಾಯವಾಗಿ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರದರ್ಶಿಸುವುದು ಮತ್ತು ಸದರಿ ಮಾಹಿತಿಯನ್ನು ಪರೀಕ್ಷೆ ಪ್ರಾರಂಭವಾಗುವುದಕ್ಕೆ ಮುಂಚಿತವಾಗಿ ಕಡ್ಡಾಯವಾಗಿ ಪರೀಕ್ಷಾ ಕೊಠಡಿಯೊಳಗೆ ವಿದ್ಯಾರ್ಥಿಗಳಿಗೆ ಓದಿ ಹೇಳತಕ್ಕದ್ದು.**

**ಮೇಲ್ಕಂಡ ಎಲ್ಲಾ ವಿಷಯಗಳು ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು ಮತ್ತು ಪರೀಕ್ಷೆಗಳು ಸುಗಮವಾಗಿ ನಡೆಯಲು ಕ್ರಮಕೈಗೊಳ್ಳುವುದು.**

ಕುಲಸಚಿವರು(ಮೌಲ್ಯಮಾಪನ)

ಗೆ

**ಪ್ರಾಂಶುಪಾಲರು, ಸಂಯೋಜಿತ ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು**

**ಪ್ರತಿಗಳು:**

1. ಸರ್ಕಾರದ ಅಧೀನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-01.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವಿಶ್ವವಿದ್ಯಾನಿಲಯದ ಅಂತರ್ಜಾಲ (Website)ದಲ್ಲಿ ಇಂದೇ ಪ್ರಕಟಿಸುವುದು.
6. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಕಛೇರಿ ಪ್ರತಿ.

# TUMKUR UNIVERSITY

Pareeksha Bhavan, B.H. Road, Tumkur – 572103, Phone: 0816- 2255650, 2273511 Fax: 0816-2270719

No.TU.:Exam:UG-TT:2017-18 : 564 Date:26.07.2017

The Final Time Table of I Semester (CBCS) B.Ed. Examination August-2017

| Date & Day | Time | Subjects |
|---|---|---|
| 17.08.2017 Thursday | 10.00 AM to 01.00 PM | Childhood and Adolescence |
| 19.08.2017 Saturday | 10.00 AM to 11.30 AM | UDP of Language / UDP of Mathematics |
| 22.08.2017 Tuesday | 10.00 AM to 11.30 AM | UDP of Social Science / UDP of Science/ UDP of Commerce |
| 26.08.2017 Saturday | 10.00 AM to 01.00 PM | Philosophy and Sociology of Education |
| 29.08.2017 Tuesday | 10.00 AM to 01.00 PM | Educational Technology |

The Final Time Table of III Semester (CBCS) B.Ed. Examination August-2017

| Date & Day | Time | Subjects |
|---|---|---|
| 16.08.2017 Wednesday | 10.00 AM to 01.00 PM | Inclusive Education |
| 18.08.2017 Friday | 10.00 AM to 11.30 AM | Pedagogy of School Subject – Kannada, English, Sanskrit, Hindi, Urdu, Physics |
| 21.08.2017 Monday | 10.00 AM to 01.00 PM | Educational Evaluation |
| 23.08.2017 Wednesday | 10.00 AM to 11.30 AM | Pedagogy of School Subject – Commerce, Chemistry, Geography |
| 28.08.2017 Monday | 10.00 AM to 01.00 PM | Guidance and Counseling / Value Education |
| 30.08.2017 Wednesday | 10.00 AM to 11.30 AM | Pedagogy of School Subject – History, Mathematics, Biology |

Registrar (Evaluation)

E\Bhuvana\UG-T.T.-Nov/Dec10\Bed I & II Sem

# TUMKUR UNIVERSITY

Pareeksha Bhavan, B.H. Road, Tumkur – 572103, Phone: 0816- 2255650, 2273511 Fax: 0816-2270719

No.TU.:Exam:UG-TT:2017-18 : 564 Date:26.07.2017

The Final Time Table of II Semester (Repeaters) B.Ed. Examination August-2017

| Date & Day | Time | Subjects |
|---|---|---|
| 16.08.2017 Wednesday | 10.00 AM to 01.00 PM | C - 5 -School Management |
| 18.08.2017 Friday | 10.00 AM to 11.30 AM | C – 7 -Education and National Concerns |
| 21.08.2017 Monday | 10.00 AM to 01.00 PM | C – 6 – Psychology of Learning and Instruction |
| 23.08.2017 Wednesday | 10.00 AM to 01.00 PM | CCM of Teaching: Chemistry / Mathematics/Geography |
| 28.08.2017 Monday | 10.00 AM to 01.00 PM | CCM of Teaching: Physics / Biology / History and Civics |
| 30.08.2017 Wednesday | 10.00 AM to 01.00 PM | CCM of Teaching: Kannada/Sanskrit/Hindi / English / Urdu |

The Final Time Table of I Semester (Repeaters) B.Ed. Examination August-2017

| Date & Day | Time | Subjects |
|---|---|---|
| 17.08.2017 Thursday | 10.00 AM to 01.00 PM | C-1- Education in Emerging India |
| 19.08.2017 Saturday | 10.00 AM to 01.00 PM | C-2 - Fundamentals of Educational Psychology |
| 22.08.2017 Tuesday | 10.00 AM to 11.30 AM | C-4 -Information and Communication Technology |
| 26.08.2017 Saturday | 10.00 AM to 01.00 PM | C-3 - Secondary Education in India |
| 29.08.2017 Tuesday | 10.00 AM to 01.00 PM | CCM of Teaching: Kannada / English/Hindi/Urdu/Sanskrit |
| 31.08.2017 Thursday | 10.00 AM to 01.00 PM | CCM of Teaching: Chemistry / Mathematics/ History and Civics |
| 01.09.2017 Friday | 10.00 AM to 01.00 PM | CCM of Teaching Physics / Geography/ Biology |

Registrar (Evaluation)

E\Bhuvana\UG-T.T.-Nov/Dec10\Bed I & II Sem

ತುಮಕೂರು ವಿಶ್ವವಿದ್ಯಾನಿಲಯ
ಪರೀಕ್ಷಾ ಭವನ, ಬಿ.ಎಚ್.ರಸ್ತೆ, ತುಮಕೂರು-572 103, ☎ : 0816-2255650, 2273511 ಫ್ಯಾಕ್ಸ್ : 0816- 2270719

## ಸೂಚನಾ ಫಲಕಕ್ಕೆ ಕಡ್ಡಾಯವಾಗಿ

ವಿದ್ಯಾರ್ಥಿಗಳು ತಮ್ಮ ಉತ್ತರ ಪತ್ರಿಕೆಯಲ್ಲಿ ಯಾವುದೇ ರೀತಿಯ ಹೆಸರು, ಗುರುತು, ಚಿಹ್ನೆ ಅಥವಾ ಸಂಕೇತಗಳನ್ನು ಬರೆಯಬಾರದು. ಬರೆದಿರುವುದು ಕಂಡುಬಂದಲ್ಲಿ ಅಂತಹ ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಅಕ್ರಮ ಚಟುವಟಿಕೆಯೆಂದು ಪರಿಗಣಿಸಿ ಅದನ್ನು ಮೌಲ್ಯಮಾಪನ ಕಾರ್ಯದಿಂದ ಹೊರಗಿಡಲಾಗುವುದು.

ಕುಲಸಚಿವರು(ಮೌಲ್ಯಮಾಪನ)